ಇ) ಪಡಿತರ ಚೀಟಿದಾರರ ಸಂಖ್ಯೆ ಎಷ್ಟು?

ಈ) ಎಷ್ಟು ಪಡಿತರದಾರರಿಗೆ ಒಂದರಂತೆ ನ್ಯಾಯಬೆಲೆ ಅಂಗಡಿ ಮಂಜೂರು ಮಾಡಲಾಗಿದೆ?

ಶ್ರೀ ಟಿ.ಎನ್. ನರಸಿಂಹಮೂರ್ತಿ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು)

ಅ) 9 ನ್ಯಾಯಬೆಲೆ ಅಂಗಡಿಗಳು

ಆ) 38 ಜನರು

ಇ) 5325 ಪಡಿತರ ಚೀಟಿಗಳಿರುತ್ತವೆ.

ಈ) 350 ರಿಂದ 1300 ವರೆಗಿನ ಪಡಿತರ ಚೀಟಿಗಳಿಗೆ ಒಂದರಂತೆ ನ್ಯಾಯಬೆಲೆ ಅಂಗಡಿ ಮಂಜೂರು ಮಾಡಲಾಗಿದೆ.

ಬೆಳಗಾವಿಯಲ್ಲಿ ರೀಜನಲ್ ಮೆಡಿಕಲ್ ರೀಸರ್ಚ್ ಸಂಸ್ಥೆಯನ್ನು ಪ್ರಾರಂಭಿಸುವ ಬಗ್ಗೆ

548. ಶ್ರೀ ಮಲ್ಲಾರಿಗೌಡ ಎಸ್. ಪಾಟೀಲ್ (ಸಂಕೇಶ್ವರ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿಯಲ್ಲಿ ಪ್ರಾದೇಶಿಕ ವೈದ್ಯಕೀಯ ಸಂಶೋಧನಾ ಕೇಂದ್ರ ಪ್ರಾರಂಭಿಸುವುದಕ್ಕಾಗಿ ಎಷ್ಟು ಎಕರೆ ಜಮೀನು ತೆಗೆದುಕೊಳ್ಳಲಾಗಿದೆ?

ಆ) ಬೆಳಗಾವಿಯಲ್ಲಿ ಪ್ರಾದೇಶಿಕ ವೈದ್ಯಕೀಯ ಸಂಶೋಧನಾ ಕೇಂದ್ರವನ್ನು ಬೇರೆ ಕಡೆಗೆ ವರ್ಗ ಮಾಡುವ ವಿಚಾರವು ಸರ್ಕಾರಕ್ಕೆ ಇದ್ದದ್ದು ನಿಜವೇ?

ಇ) ಹಾಗಿದ್ದಲ್ಲಿ ಸದರಿ ಕೇಂದ್ರವನ್ನು ಪ್ರಾರಂಭಿಸಲು ಕೇಂದ್ರ ಸರ್ಕಾರದ ಹಾಗೂ ರಾಜ್ಯ ಸರ್ಕಾರದ ವಂತಿಗೆ ಎಷ್ಟು?

ಶ್ರೀಮತಿ ಕೆ.ಎಸ್. ನಾಗರತ್ನಮ್ಮ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವೆಯವರು):–

ಅ) 20 ಎಕರೆ ಜಮೀನನ್ನು ಕೇಂದ್ರ ರಕ್ಷಣಾ ಇಲಾಖೆಯಿಂದ ಪಡೆಯಲಾಗಿದೆ.

ಆ) ಈ ವಿಷಯದ ಬಗ್ಗೆ ರಾಜ್ಯ ಸರ್ಕಾರದಲ್ಲಿ ಮಾಹಿತಿ ಇರುವುದಿಲ್ಲ.

ಇ) ಈ ಕೇಂದ್ರಕ್ಕೆ ಇಂಡಿಯನ್ ಕೌನ್ಸಿಲ್ ಆಫ್ ಮೆಡಿಕಲ್ ರೀಸರ್ಚ್ ಅವರಿಂದ ಪ್ರಾರಂಭಿಸಿರುವುದರಿಂದ ರಾಜ್ಯ ಸರ್ಕಾರಕ್ಕೆ ಯಾವುದೇ ಆರ್ಥಿಕ ಹೊಣೆಗಾರಿಕೆ ಇರುವುದಿಲ್ಲ.

ಹಸಿರು ಕಾರ್ಡುಗಳನ್ನು ಬಣ್ಣ ಬದಲಾಯಿಸುವ ಬಗ್ಗೆ

539. ಶ್ರೀ ಆರ್.ವಿ. ದೇಶಪಾಂಡೆ (ಹಳಿಯಾಳ) :– ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಹಸಿರು ಕಾರ್ಡುಗಳನ್ನು ಹೊಂದಿರುವವರ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು).

ಆ) ಹಸಿರು ಕಾರ್ಡಿನ ಯೋಜನೆಗಾಗಿ ಸರ್ಕಾರ ಪ್ರತಿವರ್ಷ ವೆಚ್ಚ ಮಾಡುತ್ತಿರುವ ಹಣ ಎಷ್ಟು?

ಇ) ಈಗಿರುವ ಹಸಿರು ಕಾರ್ಡಿನ ಬಣ್ಣ ಬದಲಾಯಿಸುವ ಬಗ್ಗೆ ಸರ್ಕಾರ ಯೋಜಿಸಿದೆಯೇ?

ಈ) ಹಾಗಿದ್ದಲ್ಲಿ ಅದಕ್ಕೆ ಕಾರಣಗಳೇನು?